ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ:06/02/2019.

ತುಮಕೂರು ಜಿಲ್ಲೆ, ಕುಣಿಗಲ್ ಟೌನ್ ಹೌಸಿಂಗ್‌ಬೋರ್ಡ್ ಕಾಲೋನಿಯ ನಿವಾಸಿಯೊಬ್ಬರು ತಮ್ಮ ಮನೆಗೆ ಮೀಟರ್ ಅಳವಡಿಸಿ, ವಿದ್ಯುತ್ ಸಂಪರ್ಕ ಒದಗಿಸಿಕೊಡಲು ಕೋರಿ ಕುಣಿಗಲ್ ಬೆಸ್ಕಾಂ ಕಛೇರಿಗೆ ಅರ್ಜಿಯನ್ನು ಸಲ್ಲಿಸಿಕೊಂಡಿರುತ್ತಾರೆ. ಶ್ರೀ.ಹೆಚ್.ಟಿ. ಶಂಕರ್, ಕಿರಿಯ ಅಭಿಯಂತರರು, ಬೆಸ್ಕಾಂ, ಕುಣಿಗಲ್ ಶಾಖೆ ರವರು ಮೀಟರ್ ಅಳವಡಿಸಿ, ವಿದ್ಯುತ್ ಸಂಪರ್ಕ ನೀಡಲು ರೂ.6,000/- ಲಂಚದ ಹಣ ನೀಡಬೇಕೆಂದು ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:06/02/2019 ರಂದು ಶ್ರೀ.ಹೆಚ್.ಟಿ. ಶಂಕರ್ ರವರು ದೂರುದಾರರಿಂದ ರೂ.6,000/- ಲಂಚದ ಹಣವನ್ನು ಪಡೆದು, ತುಮಕೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿತರನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ತನಿಖೆ ಮುಂದುವರೆದಿದೆ.